ಕಾಮಗಾರಿಯನ್ನು ಪ್ರಾರಂಭಿಸುವುದು

538 (365) **ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ)** : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರಿನಿಂದ ತಾವರಗೇರೆ ರಸ್ತೆ ಈಗಾಗಲೇ ಕೇಸಿಫ್‌ನಲ್ಲಿ ಸೇರಿದ್ದು, ಇನ್ನೂ ಕಾಮಗಾರಿಯು ಪ್ರಾರಂಭವಾಗಿಲ್ಲದ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಕಾಮಗಾರಿ ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಸಿಂಧನೂರಿನಿಂದ ತಾವರೆಗೇರೆ ರಸ್ತೆಯ ಅಭಿವೃದ್ಧಿ ಕಾಮಗಾರಿಯು ಕೆಶಿಪ್–II ರ 3411 ಕಿಮೀ. ರಸ್ತೆ ಅಭಿವೃದ್ಧಿಯ ಯೋಜನೆಯಲ್ಲಿ ಸೇರಿರುತ್ತದೆ.

ಸಿಂಧನೂರಿನಿಂದ ತಾವರೆಗೇರೆ ರಸ್ತೆಯ ಅಭಿವೃದ್ಧಿ ಕಾಮಗಾರಿಯನ್ನು ಮುಂದಿನ ಎರಡನೇ ಅಥವಾ ಮೂರನೇ ಹಂತದಲ್ಲಿ ಏಷ್ಯನ್ ಅಭಿವೃದ್ಧಿ ಬ್ಯಾಂಕ್ ಅಥವಾ ಸ್ಥಳೀಯ ಹಣಕಾಸು ಸಂಸ್ಥೆಗಳ ಅಥವಾ ಖಾಸಗಿ ಬಂಡವಾಳ ಹೂಡಿಕೆಯ ಯೋಜನೆಗಳಲ್ಲಿ ತೆಗೆದುಕೊಳ್ಳಲಾಗಿದೆ. ಈ ವಿಷಯದಲ್ಲಿ ಅಧ್ಯಯನಗಳನ್ನು ಕೈಗೊಳ್ಳಲಾಗುತ್ತಿದ್ದು ಒದಗಿ ಬರಬಹುದಾದ ಆರ್ಥಿಕ ಸಂಪನ್ಮೂಲಕ್ಕೆ ಅನುಸಾರವಾಗಿ ಸೂಕ್ತವಾದ ಕ್ರಿಯಾ ಯೋಜನೆಗಳನ್ನು ಸಿದ್ಧಪಡಿಸಲಾಗುತ್ತಿದೆ. ಸಿಂಧನೂರಿನಿಂದ ತಾವರಗೇರೆ ರಸ್ತೆಯ ಅಭಿವೃದ್ಧಿ ಕಾಮಗಾರಿಗೆ ವಿವರವಾದ ಯೋಜನಾ ವರದಿಯನ್ನು ಈಗಾಗಲೇ ಸಿದ್ಧಪಡಿಸಲಾಗಿರುತ್ತದೆ.

ಆ) ಈ ಕಾಮಗಾರಿಯನ್ನು ಮೇಲೆ ತಿಳಿಸಿರುವ ಅಧ್ಯಯನವು ಪೂರ್ಣಗೊಂಡ ಬಳಿಕ ಪ್ರಾರಂಭಿಸಬಹುದಾಗಿರುತ್ತದೆ.